ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

ಸಂ:ಕರಾಸಾ/ಕೇಕ/ಸಂ/ಸಾ/ಕಾ/ಕೋವಿಡ್-19/365 /21-22 ದಿನಾಂಕ: 19/06/2021

## "ಕಛೇರಿ ಆದೇಶ"

**ವಿಷಯ:** ನಿಗಮದ ಚಾಲನಾ ಸಿಬ್ಬಂದಿಗಳು ಕಡ್ಡಾಯವಾಗಿ RT-PCR ಪರೀಕ್ಷೆಗೆ ಒಳಪಡುವ ಕುರಿತು.

**ಉಲ್ಲೇಖ:** ಕರಾಸಾ/ಕೇಕ/ಸಂ/ಸಾ/ಕಾ/ಕೋವಿಡ್-19/326/21-22 ದಿನಾಂಕ.09.06.2021.

*****

ರಾಜ್ಯದಲ್ಲಿ ಕೊರೋನಾ ಸೋಂಕಿಗೆ ಕಡಿವಾಣ ಹಾಕಲು ಹಾಗೂ ಸೋಂಕಿನ ಸರಪಳಿಯನ್ನು ಮುರಿಯಲು, ರಾಜ್ಯ ಸರ್ಕಾರವು ದಿನಾಂಕ 27.04.2021 ರ ರಾತ್ರಿ 9.00 ಗಂಟೆಯಿಂದ ದಿನಾಂಕ 21.06.2021 ರ ಬೆಳಿಗ್ಗೆ 6.00 ಗಂಟೆಯವರೆಗೆ ಜಾರಿಯಲ್ಲಿರುವಂತೆ ಕಠಿಣ ಕ್ರಮಗಳನ್ನು ವಿಧಿಸಿ ಮಾರ್ಗಸೂಚಿಗಳನ್ನು ಹೊರಡಿಸಿರುತ್ತದೆ.

ಸರ್ಕಾರವು ವಿಧಿಸಿರುವ ಕಠಿಣ ಕ್ರಮಗಳನ್ನು ತೆರವುಗೊಳಿಸಿದ ನಂತರ ನಿಗಮವು ಸಾರ್ವಜನಿಕ ಪ್ರಯಾಣಿಕರಿಗೆ ಸಾರಿಗೆ ಸೇವೆಗಳನ್ನು ಪುನರಾರಂಭಿಸಲು ಯೋಜಿಸಿದ್ದು, ನಿಗಮದ ಚಾಲನಾ ಸಿಬ್ಬಂದಿಗಳು ಸಾರ್ವಜನಿಕ ಪ್ರಯಾಣಿಕರೊಂದಿಗೆ ನೇರ ಸಂಪರ್ಕ ಹೊಂದುವ ಕಾರಣದಿಂದಾಗಿ, ಮುಂಚೂಣಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿ, ಅವರ ಕುಟುಂಬದವರು ಹಾಗೂ ಸಾರ್ವಜನಿಕ ಪ್ರಯಾಣಿಕರ ಆರೋಗ್ಯದ ಹಿತದೃಷ್ಟಿಯಿಂದ ನಿಗಮದ ಎಲ್ಲಾ ಚಾಲನಾ ಸಿಬ್ಬಂದಿಗಳು ಕಡ್ಡಾಯವಾಗಿ ಲಸಿಕೆ ಪಡೆಯುವಂತೆ ಈಗಾಗಲೇ ಉಲ್ಲೇಖಿತ ಆದೇಶದಲ್ಲಿ ಸೂಚಿಸಲಾಗಿರುತ್ತದೆ.

ಮುಂದುವರೆದು, ನಿಗಮದ ಎಲ್ಲಾ ಚಾಲನಾ ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗುವ ಹಿಂದಿನ ಮೂರು ದಿನಗಳಲ್ಲಿ ಕೋವಿಡ್‌ಗೆ ಸಂಬಂಧಿಸಿದಂತೆ RT-PCR ಪರೀಕ್ಷೆಗೆ ಕಡ್ಡಾಯವಾಗಿ ಒಳಪಟ್ಟು, ಫಲಿತಾಂಶವನ್ನು ಆಯಾ ಘಟಕ/ಕಛೇರಿಗಳಿಗೆ ತಪ್ಪದೇ ಸಲ್ಲಿಸಲು ಸೂಚಿಸಲಾಗಿದೆ. 2ನೇ ಡೋಸ್ ಕೋವಿಡ್ ಲಸಿಕೆ ಪಡೆದ ಚಾಲನಾ ಸಿಬ್ಬಂದಿಗಳು RT-PCR ಪರೀಕ್ಷೆ ಮಾಡಿಸುವ ಅವಶ್ಯಕತೆ ಇರುವುದಿಲ್ಲ.

ಮೇಲ್ಕಂಡಂತೆ, ಎಲ್ಲಾ ಘಟಕ ವ್ಯವಸ್ಥಾಪಕರು ಹಾಗೂ ಇತರೆ ಅಧಿಕಾರಿಗಳು, ತಮ್ಮ ಅಧೀನ ಚಾಲನಾ ಸಿಬ್ಬಂದಿಗಳು 2ನೇ ಡೋಸ್ ಲಸಿಕೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರ ಅಥವಾ ಕರ್ತವ್ಯಕ್ಕೆ ಹಾಜರಾಗುವ ಹಿಂದಿನ ಮೂರು ದಿನಗಳಲ್ಲಿ RT-PCR ಪರೀಕ್ಷೆಗೆ ಒಳಪಟ್ಟಿರುವುದನ್ನು (SMS ವರದಿ) ಖಾತ್ರಿ ಪಡಿಸಿಕೊಂಡು, ಕೋವಿಡ್‌ಗೆ ಸಂಬಂಧಿಸಿದ ರೋಗ ಲಕ್ಷಣಗಳನ್ನು ಹೊಂದಿಲ್ಲದ (Negative report ಹೊಂದಿರುವ) ಸಿಬ್ಬಂದಿಗಳನ್ನು ಮಾತ್ರ ಕರ್ತವ್ಯಕ್ಕೆ ನಿಯೋಜಿಸುವುದು.

ಸದರಿ ವಿಷಯವನ್ನು ಎಲ್ಲಾ ಚಾಲನಾ ಸಿಬ್ಬಂದಿಗಳ ಗಮನಕ್ಕೆ ತಂದು, ಮುಂದಿನ ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ತಿಳಿಸಲಾಗಿದೆ.

(ಶಿವಯೋಗಿ ಸಿ ಕಳಸದ, ಭಾ.ಆ.ಸೇ)
ವ್ಯವಸ್ಥಾಪಕ ನಿರ್ದೇಶಕರು
ಕ.ರಾ.ರ.ಸಾ.ನಿಗಮ

**ಪ್ರತಿ:** ಎಲ್ಲಾ ಹಿರಿಯ/ವಿಭಾಗ ನಿಯಂತ್ರಣಾಧಿಕಾರಿಗಳು, ಕರಾರಸಾ ನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
**ಪ್ರತಿ:** ಎಲ್ಲಾ ಇಲಾಖಾ ಮುಖ್ಯಸ್ಥರು, ಕರಾರಸಾ ನಿಗಮ, ಕೇಂದ್ರ ಕಛೇರಿ ರವರ ಮಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
**ಪ್ರತಿ:** ಹಿರಿಯ/ಆಪ್ತ ಕಾರ್ಯದರ್ಶಿ, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಭ:ಜಾ)/ನಿರ್ದೇಶಕರು(ಸಿ:ಪ) ರವರ ಮಾಹಿತಿಗಾಗಿ.